# ಹಿರಿಯ ಶ್ರೇಣಿ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.

**CC No. 580/2022**

**PW-4 CW-3**

| | | |
|---|---|---|
| ಸಾಕ್ಷಿದಾರನ ಹೆಸರು | : | ಹುಲುಗಪ್ಪ ತಂದೆ ಯಲ್ಲಪ್ಪ |
| ವಯಸ್ಸು | : | 27 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಬೋಗಿರಾಮನಗುಂಡ |
| ಪ್ರಮಾಣೀಕರಿಸಿದ ದಿನಾಂಕ | : | 24-10-2024 |

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಸಾಕ್ಷಿ ಪಂಚನಾಮೆಗಳ ಮೆಲಿರುವ ಸಹಿಗಳನ್ನು ನೋಡಿ ಗುರುತಿಸಿದ್ದು ಪಂಚನಾಮೆಗಳನ್ನು ಈಗಾಗಲೇ ನಿಪಿ-2 ಮತ್ತು ನಿಪಿ-3 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಮತ್ತು ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ರಲ್ಲಿ ಬರೆದ ವಿಷಯ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದ.**

ದಿನಾಂಕ 05-07-2022 ರಂದು ಜಾಲಹಳ್ಳಿ ಪೊಲೀಸರು ಬೆಳಿಗ್ಗೆ 9-30 ರಿಂದ 10-15 ಮತ್ತು 10-30 ರಿಂದ 11-15 ಗಂಟೆಯ ಸಮಯದಲ್ಲಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪೊಲೀಸರು ನಾಗಲಾಪೂರ ಗ್ರಾಮದ ಸರ್ವೆ ನಂಬರ 20 ಮತ್ತು 32 ರಲ್ಲಿ ಎರಡು ಪಂಚನಾಮೆಗಳನ್ನು ಮಾಡಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ಹೇಳಿರುತ್ತಾರೆ.**

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.